**All India Radio: Bangalore**
**Regional Bulletin In Kannada**
**22.09.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**22.09.2025 / 2.30 p.m.**

**<><><><>**

ಮುಖ್ಯಾಂಶಗಳು

೧. ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮೂಲಕ ನಾಡಹಬ್ಬ ದಸರಾಗೆ ಸಾಹಿತಿ ಬಾನು ಮುಷ್ತಾಕ್ ಚಾಲನೆ

೨. ಬೆಂಗಳೂರು ಹೊರತುಪಡಿಸಿ ರಾಜ್ಯಾದ್ಯಂತ ಇಂದಿನಿಂದ ಸಾಮಾಜಿಕ-ಆರ್ಥಿಕ ಶೈಕ್ಷಣಿಕ ಸಮೀಕ್ಷೆ ಆರಂಭ

೩. ಒಂದು ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮ ಅನಾವರಣಗೊಳಿಸಿದ ಸಚಿವ ಪ್ರಿಯಾಂಕ್ ಖರ್ಗೆ

೪. ಕಲಬುರ್ಗಿಯಲ್ಲಿ ಧಾರಕಾರ ಮಳೆ; ಕಾಳಗಿ, ಚಿತ್ತಾಪುರದಲ್ಲಿ ಜನಜೀವನ ಅಸ್ತವ್ಯಸ್ಥ

೫. ಇಂದಿನಿಂದ ಪರಿಷ್ಕೃತ ಸರಕು ಮತ್ತು ಸೇವಾ ತೆರಿಗೆ ವ್ಯವಸ್ಥೆ ಜಾರಿ - ಬಿಜೆಪಿ ಸಂಭ್ರಮಾಚರಣೆ

****************

ನಾಡ ಹಬ್ಬ ವಿಶ್ವ ವಿಖ್ಯಾತ ಮೈಸೂರು ದಸರಾಗೆ ಬೂಕರ್ ಪ್ರಶಸ್ತಿ ಪುರಸ್ಕೃತೆ ಬಾನು ಮುಷ್ತಾಕ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ನಾಡ ದೇವಿ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದ್ದಾರೆ. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಚುನಾವಣೆಯಲ್ಲಿ ರಾಜಕಾರಣ ಮಾಡೋಣ. ನಾಡಹಬ್ಬ ವಿಚಾರದಲ್ಲಿ ರಾಜಕೀಯ ಬೇಡ ಎಂದು ಪ್ರತಿಪಕ್ಷಗಳಿಗೆ ಕಿವಿಮಾತು ಹೇಳಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲಿಸಲ್ಲ ಎಂದು ತಿಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಗ್ಯಾರಂಟಿಗಳಿಂದಾಗಿ ರಾಜ್ಯದ ಜನರ ತಲಾ ಆದಾಯ ದೇಶದಲ್ಲೇ ನಂಬರ್ ಒನ್ ಆಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( ೨೯ ಸೆಕೆಂಡುಗಳು)

ಬಳಿಕ ಮಾತಾನಾಡಿದ ಬಾನು ಮುಷ್ತಾಕ್, ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ಕೇವಲ ಮೈಸೂರು ಅಥವಾ ರಾಜ್ಯ, ದೇಶಕ್ಕೆ ಸೀಮಿತವಾಗದೆ ಇಡೀ ಜಗತ್ತಿಗೆ ವ್ಯಾಪಿಸಿ ಮಾನವ ಕುಲಕ್ಕೆ ಶಾಂತಿ, ನ್ಯಾಯ, ಸಮಾನತೆಯ ದೀಪವಾಗಲಿ ಎಂದು ಕರೆ ನೀಡಿದ್ದಾರೆ. ಸ್ತ್ರೀ ಎಂದರೆ ಕೇವಲ ತಾಯಿ ಮಾತ್ರವಲ್ಲ ಅನ್ಯಾಯದ ವಿರುದ್ದ ಹೋರಡುವ ಶಕ್ತಿಯು ಹೌದು ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದಕ್ಕೂ ಮೊದಲು ಬಾನು ಮುಷ್ತಾಕ್, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವರೊಂದಿಗೆ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದರು.

*****************

ನವರಾತ್ರಿ ಹಿನ್ನೆಲೆಯಲ್ಲಿ ನಾಡಿನಾದ್ಯಂತ ಇಂದಿನಿಂದ ಶಕ್ತಿ ದೇವತೆ ಆರಾಧನೆ ಪ್ರಾರಂಭವಾಗಿದ್ದು, ಕೋಲಾರ ನಗರದ ಕೋಲಾರಮ್ಮ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ಇದೇ ಮೊದಲ ಬಾರಿಗೆ ಲಡ್ಡು ಪ್ರಸಾದ ವಿತರಣೆ ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್ ರವಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ನಾಡ ಹಬ್ಬ ದಸರಾ ಅಂಗವಾಗಿ ಶಕ್ತಿ ದೇವತೆಗಳ ಆರಾಧನೆ ಆರಂಭಗೊಂಡಿದೆ. ವಿವಿಧ ದೇವಾಲಯಗಳಲ್ಲಿ ಇಂದಿನಿಂದ ಅಕ್ಟೋಬರ್ ೨ ರ ವರೆಗೆ ನಿತ್ಯ ವಿವಿಧ ಅಲಂಕಾರ, ಪೂಜಾ ಕೈಂಕರ್ಯಗಳು ನೆರವೇರಲಿವೆ. ಚಿಕ್ಕಮಗಳೂರು ಜಿಲ್ಲೆಯ ವಿವಿಧ ದೇವಾಲಯಗಳಲ್ಲಿ ನವರಾತ್ರಿ ಉತ್ಸವ ಇಂದಿನಿಂದ ಆರಂಭಗೊಂಡಿದೆ. ಶೃಂಗೇರಿ ಶಾರದಾ ಪೀಠದಲ್ಲಿ ಇಂದು ಬೆಳಗ್ಗೆ ನವರಾತ್ರಿ ವಿಶೇಷ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗಿದ್ದು ಮೊದಲ ದಿನ ದೇವಿಗೆ ಹಂಸವಾಹಿನಿ ಅಲಂಕಾರ ಮಾಡಲಾಗಿದೆ. ರಂಭಾಪುರಿ ಮಠದ ವತಿಯಿಂದ

ಪ್ರತಿ ವರ್ಷ ನಡೆಸಲಾಗುವ ದಸರಾ ಮಹೋತ್ಸವವುಈ ಭಾರಿ ಬೀದರ್ ಜಿಲ್ಲೆಯ ಬಸವ ಕಲ್ಯಾಣದಲ್ಲಿ ನಡೆಯಲಿದೆ.

*****************

ಬೆಂಗಳೂರು ಹೊರತುಪಡಿಸಿ ರಾಜ್ಯಾದ್ಯಂತ ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆರಂಭಗೊಂಡಿದೆ. ತಾಂತ್ರಿಕ ಕಾರಣಗಳಿಂದಾಗಿ ಎರಡು ಮೂರು ದಿನಗಳ ನಂತರ ಬೆಂಗಳೂರಿನಲ್ಲಿ ಸಮೀಕ್ಷೆ ಆರಂಭವಾಗಲಿದೆ. ಈ ಸಮಗ್ರ ಸಮೀಕ್ಷೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ನಾಗರಿಕರಿಗೆ ಮನವಿ ಮಾಡಿದ್ದಾರೆ. "ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಇಂದಿನಿಂದ ಅಕ್ಟೋಬರ್ ೭ ರವರೆಗೆ ಸಮಗ್ರ ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲಿದೆ. ಈ ಕಾರ್ಯಕ್ಕಾಗಿ ಸುಮಾರು ೧ ಲಕ್ಷ ೭೫ ಸಾವಿರದ ಶಿಕ್ಷಕರನ್ನು ನಿಯೋಜಿಸಲಾಗಿದೆ.

*****************

ಕೋಲಾರದಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ವಿಧಾನ ಪರಿಷತ್ ಸದಸ್ಯ ಎಂ. ಎಲ್. ಅನಿಲ್ ಕುಮಾರ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಗಣತಿದಾರರು ಪ್ರತಿ ಮನೆಗೆ ಭೇಟಿ ನೀಡುವ ಮೂಲಕ ಸಮಗ್ರ ಮಾಹಿತಿಯನ್ನು ಕಲೆಹಾಕಬೇಕು. ಇದರಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸರ್ಕಾರವು ಪೂರಕ ಯೋಜನೆಗಳನ್ನು ರೂಪಿಸಲು ಸಾಧ್ಯವಾಗಲಿದೆ ಎಂದರು. ಹಾವೇರಿ ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಚಾಲನೆ ನೀಡಲಾಗಿದ್ದು, ಅಕ್ಟೋಬರ್ ೭ರವರೆಗೆ ನಡೆಯಲಿರುವ ಸಮೀಕ್ಷೆಯಲ್ಲಿ ಎಲ್ಲರೂ ಭಾಗವಹಿಸುವಂತೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

*****************

ರಾಜ್ಯ ಸರ್ಕಾರ ಸಮೀಕ್ಷೆಯಿಂದ ಕುರ್ಚಿ ಉಳಿಸಬಹುದು ಹೊರತು ಯಾವುದೇ ಜಾತಿಗಳಿಗೆ ಸಾಮಾಜಿಕ ನ್ಯಾಯಾ ಒದಗಿಸಲು ಸಾಧ್ಯವಿಲ್ಲ ಎಂದು ಬಿಜೆಪಿ ಆರೋಪಿಸಿದೆ. ಸರ್ಕಾರಕ್ಕೆ ಜಾತಿಗಣತಿ ನಡೆಸುವ ಅಧಿಕಾರ ಇಲ್ಲ. ಇದು ಸಾಮಾಜಿಕ, ಆರ್ಥಿಕ ಸಮೀಕ್ಷೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಮೀಕ್ಷೆಗೆ ೪೨೫ ಕೋಟಿ ರೂಪಾಯಿ ಖರ್ಚು ಮಾಡುತ್ತಿದ್ದು, ಸರ್ಕಾರ ಜನರ ಹಣ ಪೋಲು ಮಾಡುತ್ತಿದೆ ಎಂದು ದೂರಿದ್ದಾರೆ.

*****************

ರಾಜ್ಯ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯಿಂದ, ಬೆಂಗಳೂರು ಹೊರತು ಪಡಿಸಿ ರಾಜ್ಯಾದ್ಯಂತ ನಾವೀನ್ಯತೆಯನ್ನು ಹೆಚ್ಚಿಸಲು, ೧ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮ ಅನಾವರಣಗೊಳಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತಾನಾಡಿದ ಅವರು, ಇದು ೫ ಲಕ್ಷ ಉದ್ಯೋಗಗಳನ್ನು ಸೃಷ್ಟಿಸಲು ಮತ್ತು ದೃಢವಾದ ನವೋದ್ಯಮ ಪರಿಸರ ವ್ಯವಸ್ಥೆಗಳನ್ನು ನಿರ್ಮಿಸಲು ವಿನ್ಯಾಸಗೊಳಿಸಲಾದ ಮಹತ್ವದ ಕಾರ್ಯಕ್ರಮವಾಗಿದೆ ಎಂದು ಹೇಳಿದ್ದಾರೆ. ಎಲ್‌ಇಪಿ ಯೋಜನೆಯನ್ನು ಮೈಸೂರು-ಚಾಮರಾಜನಗರ, ಮಂಗಳೂರು-ಉಡುಪಿ, ಹುಬ್ಬಳ್ಳಿ-ಬೆಳಗಾವಿ-ಧಾರವಾಡ, ತುಮಕೂರು, ಕಲಬುರಗಿ ಮತ್ತು ಶಿವಮೊಗ್ಗ ಮುಂತಾದ ಕ್ಲಸ್ಟರ್‌ಗಳಲ್ಲಿ ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ನವೋತ್ಪಾದನಾ ಹಬ್‌ಗಳಾಗಿ ಪರಿವರ್ತಿಸಿ ರೂಪಾಂತರಗೊಳಿಸಲಿದೆ ಎಂದು ಮಾಹಿತಿ ನೀಡಿದ್ದಾರೆ.

*****************

ಕಲಬುರಗಿ ಜಿಲ್ಲೆಯಲ್ಲಿ ನಿನ್ನೆಯಿಂದ ನಿರಂತರವಾಗಿ ಧಾರಾಕಾರ ಮಳೆ ಸುರಿಯುತ್ತಿದೆ. ಮಳೆ ಹಾಗೂ ಪ್ರವಾಹ ಪೀಡಿತ ಗ್ರಾಮಗಳಲ್ಲಿ ಪರಿಹಾರ ಕಾರ್ಯ

ಸಮರೋಪಾದಿಯಲ್ಲಿ ನಡೆಯುತ್ತಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಣ್ಣೆತೊರ ನದಿ ತುಂಬಿ ಹರಿಯುತ್ತಿದ್ದು ಕಾಳಗಿ ಹಾಗೂ ಚಿತ್ತಾಪುರ ತಾಲೂಕಿನ ನದಿ ಪಾತ್ರದ ಹಲವು ಗ್ರಾಮಗಳಿಗೆ ನೀರು ನುಗ್ಗಿದೆ. ಸರ್ಕಾರಿ ಶಾಲೆಗಳು, ಸಮುದಾಯ ಭವನಗಳು ಸೇರಿದಂತೆ ದೇವಸ್ಥಾನಗಳನ್ನು ಕಾಳಜಿ ಕೇಂದ್ರಗಳನ್ನಾಗಿ ಮಾಡಿ ಪ್ರವಾಹ ಪೀಡಿತ ಗ್ರಾಮಗಳ ಜನರನ್ನು ಸುರಕ್ಷಿತವಾಗಿ ಅಲ್ಲಿಗೆ ಸ್ಥಳಾಂತರಿಸಲಾಗಿದೆ.

*****************

ಪರಿಷ್ಕೃತ ಸರಕು ಮತ್ತು ಸೇವಾ ತೆರಿಗೆ ವ್ಯವಸ್ಥೆ ಇಂದಿನಿಂದ ಜಾರಿಗೆ ಬಂದಿದ್ದು ದೈನಂದಿನ ಅಗತ್ಯ ವಸ್ತುಗಳು ಮತ್ತು ಜೀವರಕ್ಷಕ ಔಷಧಿಗಳು ಸೇರಿದಂತೆ ಸುಮಾರು ೩೭೦ ಉತ್ಪನ್ನಗಳ ಮೇಲಿನ ತೆರಿಗೆಯನ್ನು ಕಡಿಮೆ ಮಾಡಲಾಗಿದೆ. ಸರಳೀಕೃತ ಜಿ.ಎಸ್.ಟಿ.ಯನ್ನು ಸ್ವಾಗತಿಸಿ ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯದ ಮುಂದೆ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಲಾಯಿತು. ಸಾರ್ವಜನಿಕರಿಗೆ ಸಿಹಿ ಹಂಚಿ ಕಾರ್ಯಕರ್ತರು ಸಂಭ್ರಮಿಸಿದರು.

*****************

ಕೇಂದ್ರ ಸರ್ಕಾರ ಜಿಎಸ್‌ಟಿ ದರ ಕಡಿಮೆ ಮಾಡಿದ ಹಿನ್ನೆಲೆಯಲ್ಲಿ ಬಳ್ಳಾರಿಯಲ್ಲಿಂದು ವಿವಿಧ ವ್ಯಾಪಾರಿಗಳು ಮತ್ತು ಬಿಜೆಪಿ ಮುಖಂಡರು ನಗರದ ಬ್ರೂಸ್ ಪೇಟೆ ಸರ್ಕಲ್ ನಲ್ಲಿ ಸಂಭ್ರಮಾಚರಣೆ ಮಾಡಿದರು. ಬಳ್ಳಾರಿಯ ಕಾಂಟ್ರಾಕ್ಟರ್ ಗಳು, ಬಟ್ಟೆ ವ್ಯಾಪಾರಿಗಳು, ಹೋಟೆಲ್ ಮಾಲೀಕರು ದಸರಾ ಹಬ್ಬದ ಸಂಭ್ರಮಾಚರಣೆ ವೇಳೆ ಜಿಎಸ್ಟಿ ಧರ ಕಡಿಮೆ ಮಾಡಿರೋದು ಒಳ್ಳೆಯ ಬೆಳವಣಿಗೆ. ಜಿಎಸ್ಟಿ ಕಡಿಮೆ ಮಾಡಿರೋದ್ರಿಂದ ವ್ಯಾಪಾರ ಮತ್ತಷ್ಟು ಹೆಚ್ಚಾಗೋ ನಿರೀಕ್ಷೆಯಿದೆ ಇದೆ ಎಂದು ಅಭಿಪ್ರಾಯಪಟ್ಟರು. ಮಾಜಿ ಶಾಸಕ ಸೋಮಶೇಖರ ರೆಡ್ಡಿ, ಜಿಎಸಿ ದರ ಕಡಿತದಿಂದ ಭಾರತ ಸರ್ಕಾರ ದೇಶದ ಜನತೆಗೆ ದಸರಾ ದೀಪಾವಳಿ ಹಬ್ಬದ ಕೊಡುಗೆಯಾಗಿ ನೀಡಿದೆ ಎಂದು ಹೇಳಿದರು.

*****************

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ಮೇರೆಗೆ ಗ್ರೇಟರ್ ಬೆಂಗಳೂರಿನ ಎಲ್ಲಾ ವಲಯದಲ್ಲಿ ಗುಂಡಿಗಳ ಮುಚ್ಚುವ ಕಾರ್ಯ ಭರದಿಂದ ಸಾಗುತ್ತಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಇನ್ನೇನು ಕೆಲ ದಿನಗಳಲ್ಲಿ ಎಲ್ಲಾ ವಲಯದ ಜನರಿಗೆ ನಮ್ಮ ಅಧಿಕೃತ ಆಪ್ ಮೂಲಕ ಮಾಹಿತಿ ನೀಡಲಾಗುವುದು ಎಂದು ತಿಳಿಸಿದ್ದಾರೆ. ಎಲ್ಲಾ ವಲಯಗಳಲ್ಲಿ ಗುಂಡಿ ಸಮಸ್ಯೆಯಿವೆ. ಇದನ್ನು ಮುಚ್ಚುವ ಕಾರ್ಯ ಪ್ರಾರಂಭವಾಗಿದೆ. ಇಂದು ಸಂಜೆ ಎಲ್ಲಾ ಮಾಹಿತಿಯನ್ನು ಆಪ್ ಮೂಲಕ ಸಾರ್ವಜನಿಕರಿಗೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

*****************

ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ ಚರಿತ್ರೆ ಆಧಾರಿತ 'ಚಲೋ ಜೀತೆ ಹೈ' ಕಿರು ಚಿತ್ರವನ್ನು ಧಾರವಾಡ ಐನಾಕ್ಸ್ ನ ಸ್ಮಾರ್ಟ್ ಸಿಟಿ ಮಾಲ್ ನಲ್ಲಿ ಪ್ರದರ್ಶಿಸಲಾಯಿತು. ಸಾರ್ವಜನಿಕರಿಂದ ಈ ಚಿತ್ರಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

*****************